(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, ೨೨ನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ ೧೦೯ ಪ್ರಶ್ನೆಗಳ ಪೈಕಿ ೯೨ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಸರ್.ಎಂ.ವಿಶ್ವೇಶ್ವರಯ್ಯನವರ ಜನ್ಮಸ್ಥಳವಾದ ಮುದ್ದೇನಹಳ್ಳಿಯನ್ನು ಪ್ರವಾಸೋದ್ಯಮ ಗ್ರಾಮವನ್ನಾಗಿ ಪರಿವರ್ತಿಸುವುದು.

೨೮೬೧(೩೭೪೩)

ಶ್ರೀಮತಿ ಅನುಸೂಯಮ್ಮ ನಟರಾಜನ್.ಕೆ.ಎ(ಚಿಕ್ಕಬಳ್ಳಾಪುರ): ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾರತ ರತ್ನ ಪ್ರಶಸ್ತಿ ಪಡೆದು ವಿಶ್ವ ವಿಖ್ಯಾತಿಯಾಗಿರುವ ಸರ್.ಎಂ.ವಿಶ್ವೇಶ್ವರಯ್ಯನವರ ಜನ್ಮ ಸ್ಥಳವಾದ ಮುದ್ದೇನಹಳ್ಳಿಯನ್ನು ಪ್ರವಾಸೋದ್ಯಮ ಗ್ರಾಮವನ್ನಾಗಿ ಮಾಡಬೇಕೆಂಬ ಮನವಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಚಿಕ್ಕಬಳ್ಳಾಪುರ ತಾಲ್ಲೂಕು ಕೇಂದ್ರದಲ್ಲಿ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದ ಕಾಮಗಾರಿ.

೨೮೬೨(೩೭೪೪)

ಶ್ರೀಮತಿ ಅನುಸೂಯಮ್ಮ ನಟರಾಜ್ ಕೆ. (ಚಿಕ್ಕಬಳ್ಳಾಪುರ): ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕು ಕೇಂದ್ರದಲ್ಲಿ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದ ಕಾಮಗಾರಿಯು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಹೌದು.

ಆ) ಕ್ರೀಡಾಂಗಣ ಕಾಮಗಾರಿ ಹಣದ ಕೊರತೆಯಿಂದ ಸ್ಥಗಿತಗೊಂಡಿದೆ. ರಾಜ್ಯ ವಲಯದಡಿ ಈವರೆಗೂ ರೂ.೧೫.೦೦ ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಹಾಗೂ ಕೇಂದ್ರ ಸರ್ಕಾರದ ಅನುದಾನ ಪಡೆಯಲು ಸೂಕ್ತಕ್ರಮ ಕೈಗೊಳ್ಳಲಾಗುವುದು.

ಸೂಳ್ಯ ಕ್ಷೇತ್ರದ ರಸ್ತೆಗಳಲ್ಲಿನ ಗುಂಡಿಗಳ ದುರಸ್ತಿ

೮೬೩(೩೨೮೮)

ಶ್ರೀ ಎಸ್.ಅಂಗಾರ(ಸೂಳ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

೧. ಸೂಳ್ಯ ಪಧಾನಸಭಾ ಕ್ಷೇತ್ರ ವ್ಯಾಪ್ತಿಗೆ ದರ್ಬೆ-ಕಾಣಿಯೂರು-ಸುಬ್ರಹ್ಮಣ್ಯ ರಸ್ತೆಯ ಎರಡು ಪಕ್ಕದಲ್ಲಿ ಗುಂಡಿಗಳು ಬಿದ್ದಿರುವುದಲ್ಲದೆ ರಸ್ತೆ ಮಧ್ಯೆ ಗುಂಡಿಗಳು ಬಿದ್ದು ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

೨. ಬಂದಿದ್ದಲ್ಲಿ ಈ ಬಗ್ಗೆ ಯಾವ ಕ್ರಮವನ್ನು ಕೈಗೊಳ್ಳಲಾಗುವುದು? (ಏವರ ನೀಡುವುದು)